# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 1845 (2019) |
| ಸದಸ್ಯರ ಹೆಸರು : | ಶ್ರೀ ಸಿ. ಟಿ. ರವಿ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ: | 25.03.2026<br>(ಕಂದಾಯ ಇಲಾಖೆಯಿಂದ ವರ್ಗಾಯಿಸಿದ ಪ್ರಶ್ನೆ) |
| ಉತ್ತರಿಸುವವರು : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

******

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯಾದ್ಯಂತ ನಗರ, ಪಟ್ಟಣ, ಗ್ರಾಮೀಣ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯ ಆಸ್ತಿಗಳಿಗೆ ಇ-ಸ್ವತ್ತು ವಿತರಿಸಲು ನಿರ್ಧರಿಸಿದ ಉದ್ದೇಶವೇನು: ಈ ಪ್ರಕ್ರಿಯೆ ಯಾವ ಹಂತದಲ್ಲಿದೆ: ಈವರೆಗೆ ಸಾಧಿಸಿರುವ ಪ್ರಗತಿ ಎಷ್ಟು: | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆ, ದರ ಮತ್ತು ಶುಲ್ಕಗಳು) ನಿಯಮಗಳು, 2025 ಅನ್ನು ಅಧಿಸೂಚಿಸಲಾಗಿರುತ್ತದೆ.<br><br>ಸದರಿ ನಿಯಮಗಳನ್ವಯ ಈ ಹಿಂದೆ ಇದ್ದ ಇ-ಸ್ವತ್ತು ತಂತ್ರಾಂಶವನ್ನು ನಾಗರೀಕ ಸ್ನೇಹಿಯಾಗಿ ಮಾರ್ಪಡಿಸಲಾಗಿದ್ದು, ದಿನಾಂಕ: 01.12.2025 ರಂದು ಮಾನ್ಯ ಮುಖ್ಯ ಮಂತ್ರಿಗಳು, ಮಾನ್ಯ ಉಪ ಮುಖ್ಯ ಮಂತ್ರಿಗಳು ಹಾಗೂ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಚಿವರು ಇ-ಸ್ವತ್ತು 2.0 ತಂತ್ರಾಂಶಕ್ಕೆ ಚಾಲನೆ ನೀಡಿರುತ್ತಾರೆ.<br><br>ಇ-ಸ್ವತ್ತು 2.0 ತಂತ್ರಾಂಶದಡಿ ಸಾರ್ವಜನಿಕರಿಂದ ಇದುವರೆಗೆ ಒಟ್ಟು 1,39,656 ಅರ್ಜಿಗಳು ಸ್ವೀಕೃತವಾಗಿವೆ.<br><br>ಪ್ರಸ್ತುತ, 5745 ಅರ್ಜಿಗಳು ಗ್ರಾಮ ಪಂಚಾಯತಿ ಕಾರ್ಯದರ್ಶಿಗಳ ಲಾಗಿನ್‌ನಲ್ಲಿ, 7041 ಅರ್ಜಿಗಳು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಲಾಗಿನ್‌ನಲ್ಲಿ, 3143 ಅರ್ಜಿಗಳು ಗ್ರಾಮ ಪಂಚಾಯತಿ ಅಧ್ಯಕ್ಷರ ಲಾಗಿನ್‌ನಲ್ಲಿ ಹಾಗೂ 1,523 ಅರ್ಜಿಗಳು ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳ ಲಾಗಿನ್‌ನಲ್ಲಿ ಅನುಮೋದನೆಗಾಗಿ ಬಾಕಿ ಇವೆ. ಅದಲ್ಲದೇ, 642 ಅರ್ಜಿಗಳು ಕಾರ್ಯನಿರ್ವಾಹಕ ಅಧಿಕಾರಿಗಳ ಅನುಮೋದನೆಗೊಂಡು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಲಾಗಿನ್ ನಲ್ಲಿವೆ. ಈ ರೀತಿ, ವಿವಿಧ ಹಂತಗಳಲ್ಲಿ ಒಟ್ಟು 18094 ಅರ್ಜಿಗಳು ಅನುಮೋದನೆಗಾಗಿ ಬಾಕಿ ಇರುತ್ತವೆ.<br><br>ಇದುವರೆಗೆ ಇ-ಸ್ವತ್ತು 2.0 ತಂತ್ರಾಂಶದಡಿ ಒಟ್ಟು 1,21,562 ಅರ್ಜಿಗಳು ಅನುಮೋದನೆಗೊಂಡು ವಿಲೇವಾರಿ ಮಾಡಲಾಗಿದೆ. |

| | | |
|---|---|---|
| ಆ) | ಇ-ಸ್ವತ್ತು 2.0 ತಂತ್ರಾಂಶದಲ್ಲಿ ತಾಂತ್ರಿಕ ದೋಷಗಳು ಕಾಣಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿದೆ. |
| ಇ) | ತಂತ್ರಾಂಶದಲ್ಲಿ ತಾಂತ್ರಿಕ ದೋಷಗಳು, ಸರ್ವರ್ ಡೌನ್ ಕಾರಣ ಆಸ್ತಿ ಮಾಲೀಕರಿಗೆ ತೊಂದರೆಯುಂಟಾಗಿ ಆಸ್ತಿ ನೋಂದಣಿ ವಹಿವಾಟು ಕುಸಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ವಹಿವಾಟು ಕುಸಿತದಿಂದ ಆಗಿರುವ ನಷ್ಟ ಎಷ್ಟು; | • ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆ, ದರ ಮತ್ತು ಶುಲ್ಕಗಳು) ನಿಯಮಗಳು, 2025 ರ ಅನ್ವಯ ಇ-ಸ್ವತ್ತು 2.0 ತಂತ್ರಾಂಶವನ್ನು ಅಭಿವೃದ್ಧಿಗೊಳಿಸಲಾಗಿರುತ್ತದೆ. ಇ-ಸ್ವತ್ತು 2.0 ತಂತ್ರಾಂಶದ ಪ್ರಾರಂಭದಲ್ಲಿ ಬಂದ ತಾಂತ್ರಿಕ ಸಮಸ್ಯೆಗಳನ್ನು ಗಮನಿಸಲಾಗಿದ್ದು, ಅದಕ್ಕೆ ಈ ಕೆಳಕಂಡ ಪರಿಹಾರವನ್ನು ಒದಗಿಸಲಾಗಿರುತ್ತದೆ.<br>• ಇ-ಸ್ವತ್ತು ತಂತ್ರಾಂಶದ Citizen Interface ಮೂಲಕ ಅರ್ಜಿಗಳನ್ನು ಋಣಭಾರ ಪ್ರಮಾಣಪತ್ರ (Encumbrance Certificate - EC) ಗಳನ್ನು ಸಲ್ಲಿಸಲು, ಅರ್ಜಿಗಳನ್ನು Save ಮಾಡಲು, ಇ-ಖಾತಾಗಳನ್ನು Download ಮಾಡಿಕೊಳ್ಳಲು ಇದ್ದ ತಾಂತ್ರಿಕ ಸಮಸ್ಯೆಗಳನ್ನು ಬಗೆಹರಿಸಲಾಗಿದೆ.<br>• ಇ-ಸ್ವತ್ತು ತಂತ್ರಾಂಶದ Citizen Interface ಮೂಲಕ ಅರ್ಜಿಗಳನ್ನು ಸಲ್ಲಿಸುವಾಗ ಎಲ್ಲಾ ವಿದ್ಯುತ್ ಸರಬರಾಜು ಕಂಪನಿಗಳೊಂದಿಗೆ ಮಾಡಲಾಗಿದ್ದ ಸಂಯೋಜನೆಯಲ್ಲಿ ಉಂಟಾಗುತ್ತಿದ್ದ ತಾಂತ್ರಿಕ ಸಮಸ್ಯೆಗಳನ್ನು ಬಗೆಹರಿಸಲಾಗಿದೆ.<br>• ಇ-ಸ್ವತ್ತು ತಂತ್ರಾಂಶದ ಗ್ರಾಮ ಪಂಚಾಯತಿ ಬಳಕೆದಾರರುಗಳ ಲಾಗಿನ್ ನಲ್ಲಿ ಅರ್ಜಿಗಳ ಅನುಮೋದನೆಯಲ್ಲಿ ಉಂಟಾಗುತ್ತಿದ್ದ ತಾಂತ್ರಿಕ ಸಮಸ್ಯೆಗಳನ್ನು ಬಗೆಹರಿಸಲಾಗಿದೆ.<br>• ಇ-ಸ್ವತ್ತು ತಂತ್ರಾಂಶದ Citizen Interface ಮೂಲಕ ಅರ್ಜಿಗಳನ್ನು ಸಲ್ಲಿಸುವಲ್ಲಿ ಗುಂಟೆ ಮತ್ತು Cents ನಲ್ಲಿರುವ ವಿಸ್ತೀರ್ಣವನ್ನು ಚ.ಮೀ ನಲ್ಲಿ ಪರಿವರ್ತಿಸಿ ಅರ್ಜಿಗಳನ್ನು ಸಲ್ಲಿಸಲು ಅವಕಾಶ ನೀಡಲಾಗಿದೆ.<br>• ಇ-ಸ್ವತ್ತು ತಂತ್ರಾಂಶದ Citizen Interface ಮೂಲಕ ಅರ್ಜಿಗಳನ್ನು ಸಲ್ಲಿಸುವಲ್ಲಿ ಉಂಟಾಗುತ್ತಿದ್ದ ತಾಂತ್ರಿಕ ಸಮಸ್ಯೆಗಳನ್ನು ಬಗೆಹರಿಸಲಾಗಿದೆ.<br>• ಹೊಸ ಬಡಾವಣೆಗಳಿಗೆ ಅರ್ಜಿಗಳನ್ನು ಸಲ್ಲಿಸಲು ಗ್ರಾಮ ಪಂಚಾಯತಿ ಹಂತದಲ್ಲಿ ಅವಕಾಶ ನೀಡಲಾಗಿದೆ-ಈವರೆಗೆ 678 ಹೊಸ ಬಡಾವಣೆಗಳಿಗೆ ಅರ್ಜಿ ಸಲ್ಲಿಕೆಯಾಗಿದ್ದು, ಅವುಗಳಲ್ಲಿ 139 ಹೊಸ ಬಡಾವಣೆಗಳಿಗೆ ಗ್ರಾಮ ಪಂಚಾಯತಿ ಹಂತದಲ್ಲಿ ಅನುಮೋದನೆ ನೀಡಲಾಗಿದೆ.<br>• ಹೊಸ ಬಹುಮಹಡಿ (ಅಪಾರ್ಟ್‌ಮೆಂಟ್) ಗಳಿಗೆ ಅರ್ಜಿಗಳನ್ನು ಸಲ್ಲಿಸಲು ಗ್ರಾಮ ಪಂಚಾಯತಿ ಹಂತದಲ್ಲಿ ಅವಕಾಶ ನೀಡಲಾಗಿದೆ. |

<table>
<tr>
<td></td>
<td></td>
<td>
ಮುಂದುವರೆದು,<br><br>
ಕಾವೇರಿ-2.0 ತಂತ್ರಾಂಶದಲ್ಲಿ 2024-25 ಹಾಗೂ 2025-26 ನೇ ಸಾಲಿನಲ್ಲಿ ನೋಂದಣಿಯಾಗಿರುವ ಇ-ಸ್ವತ್ತು ದಸ್ತಾವೇಜುಗಳ ಸಂಖ್ಯೆ ಹಾಗೂ ಸಂಗ್ರಹಿಸಲಾದ ರಾಜಸ್ವದ ವಿವರ ಈ ಕೆಳಕಂಡಂತಿದೆ.<br><br>
<table>
<tr><th>ವರ್ಷ</th><th>ನೋಂದಾಯಿಸಲಾದ ದಸ್ತಾವೇಜುಗಳ ಸಂಖ್ಯೆ (ಇ-ಸ್ವತ್ತು)</th><th>ಸಂಗ್ರಹಿಸಲಾದ ರಾಜಸ್ವತ (ರೂ.ಕೋಟಿಗಳಲ್ಲಿ)</th></tr>
<tr><td>2024-25</td><td>4,87,952</td><td>3382</td></tr>
<tr><td>2025-26 (24.03.2026 ರವರೆಗೆ)</td><td>6,19,986</td><td>4180</td></tr>
</table>
<br>
ಮೇಲೆ ತಿಳಿಸಿರುವಂತೆ ಇ-ಸ್ವತ್ತು ದಸ್ತಾವೇಜುಗಳ ನೋಂದಣಿ ಮತ್ತು ರಾಜಸ್ವ ಸಂಗ್ರಹಣೆಯಲ್ಲಿ ಯಾವುದೇ ಇಳಿಕೆ ಕಂಡು ಬಂದಿರುವುದಿಲ್ಲ. ಬದಲಾಗಿ ಗಣನೀಯವಾಗಿ ಹೆಚ್ಚಳವಾಗಿರುವುದು ಕಂಡುಬಂದಿರುತ್ತದೆ.
</td>
</tr>
<tr>
<td>ಈ)</td>
<td>ಸಮಸ್ಯೆ ಪರಿಹಾರಕ್ಕೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?</td>
<td>
ಇ-ಸ್ವತ್ತು 2.0 ತಂತ್ರಾಂಶದಲ್ಲಿ ಬದಲಾವಣೆ ಮಾಡಿ ಈ ಕೆಳಗಿನ ಸಮಸ್ಯೆಗಳನ್ನು ಬಗೆಹರಿಸಲಾಗಿದೆ.<br>
1. ಇ-ಸ್ವತ್ತು ತಂತ್ರಾಂಶದ Citizen Interface ಮೂಲಕ ಅರ್ಜಿಗಳನ್ನು ಋಣಭಾರ ಪ್ರಮಾಣ ಪತ್ರ (Encumbrance Certificate – EC) ಗಳನ್ನು ಸಲ್ಲಿಸುವಾಗ ಉಂಟಾಗುತ್ತಿದ್ದ ತಾಂತ್ರಿಕ ಸಮಸ್ಯೆಗಳನ್ನು ಬಗೆಹರಿಸಲಾಗಿದೆ.<br>
2. ಇ-ಸ್ವತ್ತು ತಂತ್ರಾಂಶದ Citizen Interface ಮೂಲಕ ಅರ್ಜಿಗಳನ್ನು Save ಮಾಡಲು ಉಂಟಾಗುತ್ತಿದ್ದ ತಾಂತ್ರಿಕ ಸಮಸ್ಯೆಗಳನ್ನು ಬಗೆಹರಿಸಲಾಗಿದೆ.<br>
3. ಇ-ಸ್ವತ್ತು ತಂತ್ರಾಂಶದ Citizen Interface ಮೂಲಕ ಇ-ಖಾತಾಗಳನ್ನು download ಮಾಡಿಕೊಳ್ಳಲು ಇದ್ದ ತಾಂತ್ರಿಕ ಸಮಸ್ಯೆಗಳನ್ನು ಬಗೆಹರಿಸಲಾಗಿದೆ.<br>
4. ಇ-ಸ್ವತ್ತು ತಂತ್ರಾಂಶದ Citizen Interface ಮೂಲಕ ಅರ್ಜಿಗಳನ್ನು ಸಲ್ಲಿಸುವಾಗ ಎಲ್ಲಾ ವಿದ್ಯುತ್ ಸರಬರಾಜು ಕಂಪನಿಗಳೊಂದಿಗೆ ಮಾಡಲಾಗಿದ್ದ ಸಂಯೋಜನೆಯಲ್ಲಿ ಉಂಟಾಗುತ್ತಿದ್ದ ತಾಂತ್ರಿಕ ಸಮಸ್ಯೆಗಳನ್ನು ಬಗೆಹರಿಸಲಾಗಿದೆ.<br>
5. ಇ-ಸ್ವತ್ತು ತಂತ್ರಾಂಶದ ಗ್ರಾಮ ಪಂಚಾಯತಿ ಬಳಕೆದಾರರುಗಳ ಲಾಗಿನ್‌ನಲ್ಲಿ ಅರ್ಜಿಗಳ ಅನುಮೋದನೆಯಲ್ಲಿ ಉಂಟಾಗುತ್ತಿದ್ದ ತಾಂತ್ರಿಕ ಸಮಸ್ಯೆಗಳನ್ನು ಬಗೆಹರಿಸಲಾಗಿದೆ.<br>
6. ಇ-ಸ್ವತ್ತು ತಂತ್ರಾಂಶದ Citizen Interface ಮೂಲಕ ಅರ್ಜಿಗಳನ್ನು ಸಲ್ಲಿಸುವಲ್ಲಿ ಗುಂಟೆ ಮತ್ತು Cents ನಲ್ಲಿರುವ ವಿಸ್ತೀರ್ಣವನ್ನು ಚ.ಮೀ ನಲ್ಲಿ ಪರಿವರ್ತಿಸಿ, ಅರ್ಜಿಗಳನ್ನು ಸಲ್ಲಿಸಲು ಅವಕಾಶ ನೀಡಲಾಗಿದೆ.
</td>
</tr>
</table>

| | | |
|---|---|---|
| | | 7. ಇ-ಸ್ವತ್ತು ತಂತ್ರಾಂಶದ Citizen Interface ಮೂಲಕ, ಅರ್ಜಿಗಳನ್ನು ಸಲ್ಲಿಸುವಲ್ಲಿ ಉಂಟಾಗುತ್ತಿದ್ದ ತಾಂತ್ರಿಕ ಸಮಸ್ಯೆಗಳನ್ನು ಬಗೆಹರಿಸಲಾಗಿದೆ.<br>8. ಹೊಸ ಬಡಾವಣೆಗಳಿಗೆ ಅರ್ಜಿಗಳನ್ನು ಸಲ್ಲಿಸಲು ಗ್ರಾಮ ಪಂಚಾಯತಿ ಹಂತದಲ್ಲಿ ಅವಕಾಶ ನೀಡಲಾಗಿದೆ- ಈವರೆಗೆ 678 ಹೊಸ ಬಡಾವಣೆಗಳಿಗೆ ಅರ್ಜಿ ಸಲ್ಲಿಕೆಯಾಗಿದ್ದು, ಅವುಗಳಲ್ಲಿ 139 ಹೊಸ ಬಡಾವಣೆಗಳಿಗೆ ಗ್ರಾಮ ಪಂಚಾಯತಿ ಹಂತದಲ್ಲಿ ಅನುಮೋದನೆ ನೀಡಲಾಗಿದೆ.<br>9. ನಮೂನೆ-11ಬಿ ಖಾತೆಗಳನ್ನು ನಮೂನೆ-11ಎ ಗಳಾಗಿ ಪರಿವರ್ತನೆ ಮಾಡಿಕೊಳ್ಳಲು ಗ್ರಾಮ ಪಂಚಾಯತಿ ಹಂತದಲ್ಲಿ ಅವಕಾಶ ನೀಡಲಾಗಿದೆ.<br>10. ಹೊಸ ಬಹುಮಹಡಿ (ಅಪಾರ್ಟ್‌ಮೆಂಟ್) ಗಳಿಗೆ ಅರ್ಜಿಗಳನ್ನು ಸಲ್ಲಿಸಲು ಗ್ರಾಮ ಪಂಚಾಯತಿ ಹಂತದಲ್ಲಿ ಅವಕಾಶ ನೀಡಲಾಗಿದೆ.<br>11. ನಮೂನೆ-11ಬಿ ಖಾತೆಗಳನ್ನು ಅಪಾರ್ಟ್‌ಮೆಂಟ್ ಗಳಾಗಿ ಪರಿವರ್ತನೆ ಮಾಡಿಕೊಳ್ಳಲು ಗ್ರಾಮ ಪಂಚಾಯತಿ ಹಂತದಲ್ಲಿ ಅವಕಾಶ ನೀಡಲಾಗಿದೆ. |

ಸಂಖ್ಯೆ: ಗ್ರಾಅಪ/67/ಇಆಡಳಿತ 2026

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.